ಸಂ. 4487
ದಿನಾಂಕ 26/10/18
ಬೆಂಗಳೂರು

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Helios-Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕದ ಅನುಷ್ಠಾನದ ಅವಧಿಯನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ::**
1. ಸರ್ಕಾರದ ಆದೇಶ ಸಂಖ್ಯೆ : ಇಎನ್ 48 ಎನ್‌ಸಿಇ 2017, ದಿ: 10.03.2017.
2. M/s Helios-Fusion Energy Pvt. Ltd., ರವರ ಪತ್ರ ಸಂಖ್ಯೆ:HFEPL/05/2018, ದಿನಾಂಕ: 15.06.2018.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರ ಪತ್ರ ಸಂಖ್ಯೆ : ಕೆ.ಆರ್.ಇ.ಡಿ/07/ಎಸ್.ಜಿ/2018/5756, ದಿನಾಂಕ: 24.08.2018.

* * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದ ಮೂಲಕ M/s Helios-Fusion Energy Pvt. Ltd., ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಯೋಜನೆಯನ್ನು ಸ್ಥಾಪಿಸಲು ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿರುತ್ತದೆ.

ಯೋಜನೆಯ ಅನುಷ್ಠಾನಕ್ಕೆ ಅಗತ್ಯವಾದ ಜಮೀನಿನ ಭೂ ಪರಿವರ್ತನೆಯಲ್ಲಿ ವಿಳಂಬ, ಇವ್ಯಾಕ್ಯುಯೇಷನ್ ಸಂಬಂಧಿತ ಅನುಮೋದನೆ ಪಡೆಯುವಲ್ಲಿ ಹಾಗೂ ಸಿ.ಇ.ಐ.ಜಿ. ಯಿಂದ ಅನುಮೋದನೆ ಪಡೆಯುವಲ್ಲಿ ಸಂಭವಿಸಿದ ವಿಳಂಬ ಮತ್ತು ಇನ್ನಿತರ ಕಾರಣಗಳಿಂದ ಯೋಜನೆಯನ್ನು ನಿಗದಿತ ಅವಧಿಯೊಳಗೆ ಅನುಷ್ಠಾನಗೊಳಿಸಲು ಸಾಧ್ಯವಾಗದಿರುವುದರಿಂದ ಸದರಿ ಯೋಜನೆಯ ಅನುಷ್ಠಾನದ ಅವಧಿಯನ್ನು ಯೋಜನೆಯ ಅನುಷ್ಠಾನದ ಅವಧಿಯನ್ನು ವಿಸ್ತರಿಸುವಂತೆ M/s Helios-Fusion Energy Pvt. Ltd., ಕಂಪನಿಯವರು ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಪತ್ರದ ಮೂಲಕ ಸಲ್ಲಿಸಿದ್ದ ಮನವಿಯನ್ನು ಪರಿಶೀಲಿಸಿ, ಸದರಿ ಅಭಿವೃದ್ಧಿದಾರರು ಅಪೇಕ್ಷಿತ ಕಾಲಾವಧಿ ವಿಸ್ತರಣೆಗಾಗಿ ನಿಯಮಾನುಸಾರ ಅನ್ವಯವಾಗುವ ಶುಲ್ಕವನ್ನು ಪಾವತಿಸಿರುವುದರಿಂದ ಹಾಗೂ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸಲ್ಲಿಸಲಾಗಿರುವ ಬ್ಯಾಂಕ್ ಖಾತರಿ ಮೊತ್ತದ ಅವಧಿಯನ್ನು ದಿನಾಂಕ: 14.10.2019 ರವರೆಗೆ ವಿಸ್ತರಿಸಿರುವುದರಿಂದ ಅಭಿವೃದ್ಧಿದಾರರ ಕೋರಿಕೆಯನ್ನು ಪರಿಗಣಿಸಿ M/s Helios-Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ ಘಟಕದ ಅನುಷ್ಠಾನದ ಅವಧಿಯನ್ನು ನಿಗದಿತ ಅವಧಿಯ ಮುಕ್ತಾಯಗೊಂಡ ದಿನಾಂಕದಿಂದ ಅನ್ವಯಿಸುವಂತೆ 9 ತಿಂಗಳ ಅವಧಿಗೆ ಅಂದರೆ ದಿನಾಂಕ: 08.06.2019 ರವರೆಗೆ ವಿಸ್ತರಿಸಿ ಆದೇಶವನ್ನು ನೀಡುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಪತ್ರದ ಮೂಲಕ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಸರ್ಕಾರಕ್ಕೆ ಅಭಿಪ್ರಾಯದೊಂದಿಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 355 ಎನ್‌ಸಿಇ 2018**

**ಬೆಂಗಳೂರು, ದಿನಾಂಕ: 23.10.2018.**

GM (Tech) KREDL

Helios-Fusion Energy Pvt. Ltd., ಕಂಪನಿಯವರಿಗೆ ಬಳ್ಳಾರಿ ಜಿಲ್ಲೆಯ ಶಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ ಹಂಚಿಕೆಯಾಗಿರುವ 10 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಉತ್ಪಾದನಾ

...2)

ಯೋಜನೆಯ ಅನುಷ್ಠಾನದ ಅವಧಿಯನ್ನು ನಿಯಮಾನುಸಾರ ಅನ್ವಯವಾಗುವ ಶುಲ್ಕಗಳನ್ನು ಪಾವತಿಸುವ ಷರತ್ತಿಗೊಳಪಟ್ಟು ದಿನಾಂಕ: 08.06.2019 ರವರೆಗೆ ವಿಸ್ತರಿಸಿ ಆದೇಶಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಇಎನ್ 48 ಎನ್‌ಸಿಇ 2017, ದಿನಾಂಕ : 10.03.2017 ರಲ್ಲಿನ ಷರತ್ತುಗಳು ಯಥಾವತ್ತಾಗಿ ಮುಂದುವರೆಯುತ್ತವೆ.

ಈ ಆದೇಶವನ್ನು ರದ್ದು ಮಾಡುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

please verify

Suma
Please update the date of Extension
pooja

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

23/7

(ಟಿ.ಮಂಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ(ಪ್ರ),
ಇಂಧನ ಇಲಾಖೆ.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

6 ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ.

8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗಾ.

9 M/s Helios Fusion Energy Pvt. Ltd., # 5-4-162/122, Vijayanagara Colony, Gangavathi, Koppal-583227.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.

upload it in website

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s Helios Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

**ಓದಲಾಗಿದೆ:** 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 510.

2. ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿ.

* * *

**ಪ್ರಸ್ತಾವನೆ :-**

M/s Helios Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಯೋಜನೆಯ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಏಕ ಕಡತ ಪದ್ಧತಿಯಡಿ ಮೇಲೆ ಓದಲಾದ (1) ರ ಕಡತದಲ್ಲಿ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ವಿವರ | : | ಜಿಲ್ಲೆ : ಬಳ್ಳಾರಿ<br>ತಾಲ್ಲೂಕು : ಸಿರಗುಪ್ಪ<br>ಗ್ರಾಮ : ಮುದ್ದತನೂರು |
| ಯೋಜನಾ ಪ್ರದೇಶದ ಜಮೀನಿನ ವಿವರ | : | ಖಾಸಗಿ |
| ಯೋಜನಾ ಪ್ರದೇಶದ ಸಮೀಪದ ಸಬ್-ಸ್ಟೇಷನ್ ವಿವರ | : | ರುದ್ರಪಾದ |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಮೂರನೇ ವ್ಯಕ್ತಿಗೆ ಮಾರಾಟ ಮಾಡಲು |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಅರ್ಜಿ ನೋಂದಣಿ ಶುಲ್ಕ ಪಾವತಿಸಿದೆ |

M/s Helios Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಗೆ ನಿರಾಕ್ಷೇಪಣೆಯನ್ನು ನೀಡುವ ಕುರಿತು ಮೇಲೆ ಓದಲಾದ (2) ರಂತೆ ದಿನಾಂಕ: 16.02.2017 ರಂದು ನಡೆದ ಹಂಚಿಕೆ ಸಮಿತಿ ಸಭೆಯಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಸಮಿತಿಯು ಸರ್ವಾನುಮತದಿಂದ ಶಿಫಾರಸ್ಸು ಮಾಡಿರುತ್ತದೆ. ಸದರಿ ಶಿಫಾರಸ್ಸಿನಂತೆ ಪ್ರಸ್ತಾವನೆಯನ್ನು ಪರಿಶೀಲಿಸಿ ಸರ್ಕಾರವು ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 48 ಎನ್‌ಸಿಇ 2017**
**ಬೆಂಗಳೂರು, ದಿನಾಂಕ: 10.03.2017.**

M/s Helios Fusion Energy Pvt. Ltd., ರವರಿಗೆ ಬಳ್ಳಾರಿ ಜಿಲ್ಲೆಯ ಸಿರಗುಪ್ಪ ತಾಲ್ಲೂಕಿನ ಮುದ್ದತನೂರು ಗ್ರಾಮದಲ್ಲಿ 10 ಮೆ.ವ್ಯಾ ಸಾಮರ್ಥ್ಯದ ಸೌರ ವಿದ್ಯುತ್ ಘಟಕವನ್ನು Independant Power Producer (IPP) Category ಯಡಿ ಸ್ಥಾಪಿಸಿ, ಸದರಿ ಘಟಕದಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು

.....2)

ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ **ನಿರಾಕ್ಷೇಪಣೆಯನ್ನು** ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. M/s Helios Fusion Energy Pvt. Ltd., ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ಅನ್ವಯಿಸುವ ಶುಲ್ಕ ಹಾಗೂ ಇತರ ಬ್ಯಾಂಕ್ ಖಾತರಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು;
3. ಪ್ರಸ್ತಾಪಿತ ಸೋಲಾರ್ ಘಟಕದಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು Independant Power Producer (IPP) Category ಯಡಿ ಸ್ಥಾಪಿಸಿ, ಮೂರನೇ ವ್ಯಕ್ತಿಗೆ ಮಾರಾಟ ಮಾಡಲು (Third party sale) ಹಾಗೂ ಈ ಸಂಬಂಧ ಅಗತ್ಯವಿರುವ ವಿದ್ಯುತ್ ಜಾಲಕ್ಕೆ ಜೋಡಣೆ ಮಾಡಲು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ವೀಲಿಂಗ್ ಮತ್ತು ಬ್ಯಾಂಕಿಂಗ್ ಒಪ್ಪಂದ ಮಾಡಿಕೊಳ್ಳಲು ಅನುಮತಿಸಿದೆ;
4. M/s Helios Fusion Energy Pvt. Ltd., ರವರು ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಸ್ಥಾಪಿಸಲು ಅಗತ್ಯವಿರುವ ಜಮೀನನ್ನು ಕರ್ನಾಟಕ ಭೂ-ಸುಧಾರಣೆ ಕಾಯ್ದೆಯನ್ವಯ ಖರೀದಿಸತಕ್ಕದ್ದು ಮತ್ತು ಸದರಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕೆ ಭೂ ಪರಿವರ್ತನೆ ಮಾಡಿಕೊಂಡ ನಂತರವೇ ಸೌರ ವಿದ್ಯುತ್ ಘಟಕಗಳನ್ನು ಸ್ಥಾಪಿಸತಕ್ಕದ್ದು;
5. ಯೋಜನಾ ಅಭಿವೃದ್ಧಿದಾರರು ಕೆ.ಆರ್.ಇ.ಡಿ.ಎಲ್ ಸಂಸ್ಥೆಗೆ ಸೌರ ನೀತಿ 2014-21 ರ ಪ್ರಕಾರ ಅನ್ವಯವಾಗುವ ಸಂಸ್ಕರಣಾ ಶುಲ್ಕವನ್ನು (Facilitation fee) ಹಂಚಿಕೆಯ ಆದೇಶದ ದಿನದಿಂದ 15 ದಿನಗಳೊಳಗೆ ಪಾವತಿಸಬೇಕೆಂದು ಹಾಗೂ ನಲವತ್ತೈದು ದಿನಗಳೊಳಗೆ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸಲ್ಲಿಸತಕ್ಕದ್ದು. ಇಲ್ಲದಿದ್ದಲ್ಲಿ, ಈ ಹಂಚಿಕೆಯ ಆದೇಶವು ತಂತಾನೇ ರದ್ದಾಗುವುದು;
6. ಸದರಿ ಬಿಡ್ ಸೆಕ್ಯುರಿಟಿ (Bid Security)/ಪರ್ಫಾಮೆನ್ಸ್ ಬ್ಯಾಂಕ್ ಗ್ಯಾರಂಟಿಯನ್ನು (Performance Bank Guarantee) ಸರ್ಕಾರಿ ಆದೇಶದ ಷರತ್ತುಗಳನ್ವಯ ಪ್ರಸ್ತಾವಿತ ಯೋಜನೆಯು ಪೂರ್ಣವಾಗಿ ಅನುಷ್ಠಾನಗೊಂಡ ನಂತರ ಸಂಬಂಧಪಟ್ಟ ಅಭಿವೃದ್ಧಿದಾರರಿಗೆ ಹಿಂದಿರುಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಅಗತ್ಯ ಕ್ರಮ ವಹಿಸತಕ್ಕದ್ದು;
7. M/s Helios Fusion Energy Pvt. Ltd., ರವರು ಸ್ಥಾಪಿಸುತ್ತಿರುವ ಈ ಸೌರ ವಿದ್ಯುತ್ ಘಟಕಕ್ಕೆ ಸರ್ಕಾರದ 2014-21 ರ ಸೋಲಾರ್ ನೀತಿ ಹಾಗೂ ಸರ್ಕಾರದ 2014-19 ರ ಕೈಗಾರಿಕಾ ನೀತಿಗಳ ಪ್ರಕಾರ ಅನ್ವಯವಾಗುವ ಸವಲತ್ತುಗಳು ಲಭ್ಯವಾಗುತ್ತವೆ.
8. ಪ್ರಸ್ತಾಪಿತ ಸೌರ ವಿದ್ಯುತ್ ಘಟಕವನ್ನು ಆದೇಶ ಹೊರಡಿಸಿದ ದಿನಾಂಕದಿಂದ 18 ತಿಂಗಳೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ರದ್ದು ಮಾಡುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.

2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.

...3)

3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.

4 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

5 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು.

6 ಜಿಲ್ಲಾಧಿಕಾರಿಗಳು, ಬಳ್ಳಾರಿ ಜಿಲ್ಲೆ, ಬಳ್ಳಾರಿ.

7 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ ಜಿಲ್ಲೆ, ಬಳ್ಳಾರಿ.

8 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಗುಲ್ಬರ್ಗಾ.

9 M/s Helios Fusion Energy Pvt. Ltd., # 5-4-162/122, Vijayanagara Colony, Gangavathi, Koppal 583227.

10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.